# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 561 (670)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ತಗ್ಗು ಗುಂಡಿಗಳ ಕುರಿತು

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳು ಹಳ್ಳ / ತಗ್ಗು ಗುಂಡಿಗಳಿಂದ ಕೂಡಿದ್ದು ದ್ವಿಚಕ್ರ/ಇತರೆ ವಾಹನ ಸವಾರರಿಗೆ ಸಂಚಾರ ಮಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ ವಿವರ ನೀಡುವುದು)

(ಆ) ಈ ತಗ್ಗುಗುಂಡಿಗಳಿಂದ ಹಲವು ವಾಹನ ಸವಾರರು ವಾಹನ ಚಾಲನೆ ಮಾಡುವಾಗ ನಿಯಂತ್ರಣ ಕಳೆದುಕೊಂಡು ಸಾವಿಗೆ ಈಡಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಸದರಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಧನ ನೀಡಲಾಗಿದೆ; (ವಿವರ ನೀಡುವುದು)

(ಇ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ತಗ್ಗುಗುಂಡಿಗಳಿಲ್ಲದೆ ರಸ್ತೆಗಳನ್ನು ಸುಸ್ಥಿತಿಯಲ್ಲಿಡಲು ಪಾಲಿಕೆಯಿಂದ ತೆಗೆದುಕೊಂಡ ಕ್ರಮಗಳೇನು; ಆಯಾ ವಾರ್ಡ್‌ನ ಅಧಿಕಾರಿಗಳಿಗೆ ರಸ್ತೆಗಳ ಸುಸ್ಥಿತಿಯ ಹೊಣೆಗಾರಿಕೆ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು)